ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕೊಡಗು ಜಿಲ್ಲೆ, ಮಡಿಕೇರಿ–571201

## Office of the Deputy Commissioner, Kodagu District, Madikeri-571201

**Phone : 08272-225500 Website : www.kodagu.nic.in E-Mail :deo.kodagu@gmail.com**

ಸಂಖ್ಯೆ:ಸಕಾಲ/ಸಮಾಲೋಚಕರು/15/2023-24 ದಿನಾಂಕ: 05.03.2025

## ಪತ್ರಿಕಾ ಪ್ರಕಟಣೆ

**ವಿಷಯ:-** ಕೊಡಗು ಜಿಲ್ಲಾಧಿಕಾರಿಗಳ ಕಚೇರಿಯ ಜಿಲ್ಲಾ ಸಕಾಲ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಹುದ್ದೆಗೆ ಅರ್ಜಿಯನ್ನು ಆಹ್ವಾನಿಸುವ ಕುರಿತು.

******

ಕೊಡಗು ಜಿಲ್ಲಾಧಿಕಾರಿಗಳ ಕಚೇರಿಯ ಜಿಲ್ಲಾ ಸಕಾಲ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಹುದ್ದೆಯು ಖಾಲಿ ಇದ್ದು, ಸದರಿ ಹುದ್ದೆಗೆ ಹೊರ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಸಂಬಂಧ ಅರ್ಹ ಅಭ್ಯರ್ಥಿಗಳಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿದಾರರು ನಿಗದಿತ ಅರ್ಜಿ ನಮೂನೆಯನ್ನು ಜಿಲ್ಲೆಯ ಅಧಿಕೃತ ವೆಬ್ ಸೈಟ್ https://kodagu.nic.in ರಲ್ಲಿ ಪಡೆದು ಭರ್ತಿಮಾಡಿ, ಎಲ್ಲಾ ಅಗತ್ಯ ದಾಖಲೆಗಳೊಂದಿಗೆ ನಿಗದಿತ ಅವಧಿಯೊಳಗಾಗಿ ಈ ಕೆಳಕಂಡ ವಿಳಾಸಕ್ಕೆ ಅಂಚೆ/ ಟಪಾಲು ಮುಖೇನ ಸಲ್ಲಿಸುವುದು.

**ಕಚೇರಿ ವಿಳಾಸ** : ಜಿಲ್ಲಾಧಿಕಾರಿಗಳ ಕಚೇರಿ, ಕೊಡಗು ಜಿಲ್ಲೆ, ಮಡಿಕೇರಿ.
**ಹುದ್ದೆಯ ಹೆಸರು** : ಜಿಲ್ಲಾ ಸಕಾಲ ಮಾಹಿತಿ ತಂತ್ರಜ್ಞಾನ ಸಮಾಲೋಚಕರು
**ಹುದ್ದೆಯ ಸಂಖ್ಯೆ** : 01

| | | |
|---|---|---|
| 1 | ಶೈಕ್ಷಣಿಕ ವಿದ್ಯಾರ್ಹತೆ | B.E. or B.Tech / BCA<br>Stream : Computer Science or Information Science Enginnering, Electronic and Communication Telecom |
| 2 | ಅನುಭವ | ಯಾವುದೇ ಸರ್ಕಾರಿ ಕಚೇರಿಯಲ್ಲಿ / ಕಂಪನಿ/ ಸಂಸ್ಥೆಗಳಲ್ಲಿ ಅನುಭವ ಹೊಂದಿದ್ದಲ್ಲಿ ಪ್ರಮಾಣ ಪತ್ರ<br>(Freshers also can apply) |
| 3 | ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ | **ದಿನಾಂಕ: 11.03.2025**<br>ಸಂಜೆ 5.30 ಗಂಟೆಯೊಳಗೆ. |
| 4 | ವಯೋಮಿತಿ | ಕನಿಷ್ಠ 18 ಮತ್ತು ಗರಿಷ್ಠ 40 ವರ್ಷ |
| 5 | ಸಕಾಲ ಮಿಷನ್ ನಿಂದ ನೀಡುವ ವೇತನ (Take Home + Employee PF + Employer PF Contribution + Professional Tax) | ರೂ. 27,100-/<br>(23,150+1800+1950+200) |

**ಅರ್ಹತಾ ಷರತ್ತುಗಳು:**

1. ಭಾರತೀಯ ನಾಗರೀಕರಗಿರತಕ್ಕದ್ದು.
2. ವಯೋಮಿತಿ ಕನಿಷ್ಟ 18 ಮತ್ತು ಗರಿಷ್ಠ 40 ವರ್ಷ.
3. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಬಂಧ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.
4. ಅಭ್ಯರ್ಥಿಯು ಯಾವುದೇ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿರತಕ್ಕದ್ದಲ್ಲ.

5. ಒಂದು ವರ್ಷಕ್ಕೆ ಮಾತ್ರ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು.
6. ಅಂತಿಮ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವ ಪೂರ್ವದಲ್ಲಿ ಯಾವುದೇ ಕಾರಣ ನೀಡದೆ ಈ ಆಯ್ಕೆ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದುಗೊಳಿಸುವ ಸಂಪೂರ್ಣ ಹಕ್ಕನ್ನು ಈ ಪ್ರಾಧಿಕಾರವು ಹೊಂದಿರುತ್ತದೆ.
7. ಹೆಚ್ಚಿನ ಮಾಹಿತಿಗಾಗಿ ಮೇಲಿನ ಕಚೇರಿ ವಿಳಾಸಕ್ಕೆ ಕಚೇರಿ ಸಮಯದಲ್ಲಿ ಭೇಟಿ ನೀಡಿ ಮಾಹಿತಿಯನ್ನು ಪಡೆಯಬಹುದಾಗಿದೆ.
8. **ಅಭ್ಯರ್ಥಿಯ ಸ್ವ-ವಿವರ:** 10ನೇ ತರಗತಿ ಅಂಕಪಟ್ಟಿ, ವಿದ್ಯಾಭ್ಯಾಸಕ್ಕೆ ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರ / ದಾಖಲೆಗಳನ್ನು, ನೇಮಕಾತಿ ಆದೇಶಗಳನ್ನು, ಅನುಭವ ಪ್ರಮಾಣ ಪತ್ರಗಳನ್ನು ಹಾಗೂ ಒಂದು ಭಾವಚಿತ್ರ ಮತ್ತು ಆಧಾರ್ ಜೆರಾಕ್ಸ್ ಪ್ರತಿಯನ್ನು ಅರ್ಜಿಯೊಂದಿಗೆ ದೃಢೀಕರಿಸಿ ಲಗತ್ತಿಸಿ ಕೊನೆಯ ದಿನಾಂಕದೊಳಗೆ ಮುದ್ದಾಂ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸುವುದು. ನಿಗದಿಪಡಿಸಿದ ದಿನಾಂಕ ಮತ್ತು ಸಮಯದ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

Digitally signed by AISHWARYA RAMARADHYA
Date: 05-03-2025 13:31:15

**ಅಪರ ಜಿಲ್ಲಾಧಿಕಾರಿ**
**ಹಾಗೂ DITC ಜಿಲ್ಲಾ ಮಟ್ಟದ ಆಯ್ಕೆ**
**ಸಮಿತಿ ಅಧ್ಯಕ್ಷರು,**
**ಕೊಡಗು ಜಿಲ್ಲೆ, ಮಡಿಕೇರಿ.**

**ಪ್ರತಿಯನ್ನು:-**

1. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕೊಡಗು ಜಿಲ್ಲಾ ಪಂಚಾಯಿತಿ, ಮಡಿಕೇರಿ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಉಪ ವಿಭಾಗಾಧಿಕಾರಿ, ಮಡಿಕೇರಿ ಉಪ ವಿಭಾಗ, ಮಡಿಕೇರಿ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
4. ತಹಶೀಲ್ದಾರ್, ಮಡಿಕೇರಿ, ಸೋಮವಾರಪೇಟೆ, ವಿರಾಜಪೇಟೆ, ಪೊನ್ನಂಪೇಟೆ ಮತ್ತು ಕುಶಾಲನಗರ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಡಿಕೇರಿ ಇವರಿಗೆ ಕಳುಹಿಸುತ್ತಾ, ಮೇಲ್ಕಂಡ ಪ್ರಕಟಣೆಯನ್ನು ಜಿಲ್ಲೆಯ ಸ್ಥಳೀಯ ಪತ್ರಿಕೆಯಲ್ಲಿ ಸುದ್ದಿ ರೂಪದಲ್ಲಿ ಉಚಿತವಾಗಿ ಪ್ರಕಟಿಸಲು ತಿಳಿಸಿದೆ.
6. ಜಿಲ್ಲಾ ಮಾಹಿತಿ ತಂತ್ರಜ್ಞಾನ ಅಧಿಕಾರಿ, ಎನ್.ಐ.ಸಿ, ಮಡಿಕೇರಿ ಇವರಿಗೆ ಕಳುಹಿಸುತ್ತಾ, ಮೇಲ್ಕಂಡ ಪ್ರಕಟಣೆಯನ್ನು ಹಾಗೂ ಅರ್ಜಿ ನಮೂನೆಯನ್ನು ಜಿಲ್ಲೆಯ ಅಧಿಕೃತ ವೆಬ್ ಸೈಟ್ https://kodagu.nic.in ರಲ್ಲಿ ಅಪ್ಲೋಡ್ ಮಾಡಲು ಕ್ರಮವಹಿಸುವಂತೆ ಸೂಚಿಸಿದೆ.
7. ಕಚೇರಿ ಕಡತಕ್ಕೆ.

# ಕೊಡಗು ಜಿಲ್ಲೆಯ ಜಿಲ್ಲಾ ಸಕಾಲ ಮಾಹಿತಿ ತಂತ್ರಜ್ಞಾನ ಸಮಾಲೋಚಕರ ಹುದ್ದೆಗೆ ಅರ್ಜಿ ನಮೂನೆ

ಭಾವಚಿತ್ರ

| | | |
|---|---|---|
| 1 | ಅಭ್ಯರ್ಥಿಯ ಹೆಸರು | |
| 2 | ತಂದೆಯ / ಗಂಡನ ಹೆಸರು | |
| 3 | ಪೂರ್ಣ ವಿಳಾಸ | |
| 4 | ಮೊಬೈಲ್ ಸಂಖ್ಯೆ | |
| 5 | ಇ-ಮೇಲ್ ವಿಳಾಸ | |
| 6 | ಜನ್ಮ ದಿನಾಂಕ<br>(10ನೇ ತರಗತಿ ಅಂಕಪಟ್ಟಿಯಲ್ಲಿದ್ದಂತೆ ದಾಖಲೆ ಲಗತ್ತಿಸುವುದು) | |
| 7 | ಶೈಕ್ಷಣಿಕ ವಿದ್ಯಾರ್ಹತೆ<br>ಶೇಕಡವಾರು ಗಳಿಸಿರುವ ಅಂಕಗಳ ವಿವರ<br>(ಎಲ್ಲಾ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳನ್ನು ದೃಢೀಕರಿಸಿ ನಕಲುಗಳನ್ನು ಅರ್ಜಿಯೊಂದಿಗೆ ಲಗತ್ತಿಸುವುದು) | |
| 8 | ಅನುಭವ ಪ್ರಮಾಣ ಪತ್ರಗಳು-ನೇಮಕಾತಿ ಆದೇಶ ಮತ್ತು ಅನುಭವ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು<br>(*ಇದ್ದಲ್ಲಿ ಮಾತ್ರ) | |
| 9 | ಅಭ್ಯರ್ಥಿ ನೀಡಲು ಇಚ್ಛಿಸುವ ಇತರೆ ದಾಖಲೆಗಳು | |

**ಸ್ಥಳ :**

**ದಿನಾಂಕ:**

**ಅಭ್ಯರ್ಥಿಯ ಸಹಿ**

**ಅಭ್ಯರ್ಥಿಯ ಹೆಸರು; ______________**